## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.

**ಸಿಸಿ.ನಂ.462/2018**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸರು, ಸೇಡಂ.

-:: ವಿರುದ್ಧ ::-

ಆರೋಪಿ ಸಾಬಮ್ಮ @ ಲಲಿತಾ ಗಂಡ ಈರಣ್ಣ @ ಹಣಮಂತ ವಡ್ಡರ,
ವಃ 40 ವರ್ಷ, ಉಃ ಕೂಲಿ ಕೆಲಸ,
ಸಾಃ ದೊಡ್ಡ ಅಗಸಿ, ಸೇಡಂ.

----

**ದೋ ಷಾ ರೋ ಪ ಣೆ**

ನಾನು ಶ್ರೀ ಸುನೀಲ್.ಎಸ್.ತಳವಾರ, ಬಿ.ಎ.ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ಆರೋಪಿತಳಾದ ನೀನು ನೀವು ದಿನಾಂಕ 16.04.2018 ರಂದು ಬೆಳಿಗ್ಗೆ 10.00 ಗಂಟೆ ಸುಮಾರಿಗೆ ಸೇಡಂ ಪೊಲೀಸ್ ಠಾಣಾ ಹದ್ದಿಯಲ್ಲಿರುವ ಸೇಡಂ ಪಟ್ಟಣದ ದೊಡ್ಡ ಅಗಸಿ ಏರಿಯಾದಲ್ಲಿನ ಸಾರ್ವಜನಿಕ ಸ್ಥಳದಲ್ಲಿ ಅಕ್ರಮವಾಗಿ ಕಲಬೆರಕೆ ಸೇಂದಿಯನ್ನು ಯಾವುದೇ ಪರವಾನಿಗೆ ಇಲ್ಲದೇ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದಾಗ, ಚಾಸಾ-1, 4 ರಿಂದ 7 ನೇದ್ದವರು ಕೂಡಿಕೊಂಡು, ಚಾಸಾ-2 ಮತ್ತು 3 ನೇದ್ದವರ ಸಮಕ್ಷಮದಲ್ಲಿ ದಾಳಿ ಮಾಡಿ, ಆರೋಪಿಳಾದ ನಿನ್ನ ವಶದಲ್ಲಿದ್ದ ಒಂದು ಲೀಟರ್ ಅಳತೆವುಳ್ಳ ಒಟ್ಟು 29 ಲೀಟರ್ ಕಲಬೆರಕೆ ಸೇಂದಿ ಪಾಕೆಟ್‌ಗಳನ್ನು ವಶಪಡಿಸಿಕೊಂಡಿದ್ದು, ಅಲ್ಲದೇ ಸದರಿ ಕಲಬೆರಕೆ ಸೇಂದಿ ಸೇವನೆಯಿಂದ ಮಾನವ ಜೀವಕ್ಕೆ ಹಾನಿಯಾಗುತ್ತದೆಂದು ಗೊತ್ತಿದ್ದರೂ ಸಹ ಕಲಬೆರಕೆ ಸೇಂದಿ ಮಾರಾಟ ಮಾಡಿದ್ದರಿಂದ, ಕಾರಣ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಮತ್ತು 34 ಹಾಗೂ ಭಾ.ದಂ.ಸಂ. 273 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

28/02/21

ಪ್ರ.ದ.ನ್ಯಾ.ದಂ. ಸೇಡಂ.

ದಿನಾಂಕ 28-02-2022